## Evidence Recorded through VC

## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಹೆಚ್.ಡಿ.ಕೋಟೆ

**ಸಿ.ಸಿ. ನಂ.513/09**

**ಸಿ.ಡಬ್ಲ್ಯೂ-9 ಪಿ.ಡಬ್ಲ್ಯೂ-9**

| | | |
|---|---|---|
| ಸಾಕ್ಷಿದಾರರ ಹೆಸರು | : | ವೆಂಕಟರಾಮಪ್ಪ |
| ತಂದೆಯ/ ಗಂಡನ ಹೆಸರು | : | ಮುನಿಸ್ವಾಮಪ್ಪ |
| ವಯಸ್ಸು | : | 61 ವರ್ಷ |
| ಉದ್ಯೋಗ | : | ನಿವೃತ್ತ ಪೊಲೀಸ್ ಇನ್ಸಪೇಕ್ಟರ್ |
| ವಾಸ ಸ್ಥಳ | : | ಬಂಗಾರಪೇಟೆ |

**ದಿನಾಂಕ 07.11.2025 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ:- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು 2009 ರಿಂದ 2010 ಸರಗೂರು ಪೋಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 24.06.2009 ರಂದು ಚಾಸಾ 8 ರವರಿಂದ ಕಡತಗಳನ್ನು ಸ್ವೀಕರಿಸಿ ಅದೇ ದಿನ ಚಾಸಾ 1 ರವರ ಮರು ಹೇಳಿಕೆ ದಾಖಲೆ ಮಾಡಿಕೊಂಡಿರುತ್ತೇನೆ. ದಿಃ26.06.2009 ರಂದು ಚಾಸಾ 4 ರಿಂದ 6 ರವರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ. ಅದೇ ದಿನ ಹೆಚ್ ಸಿ ಕೃಷ್ಣರಾಜ ಅವರು ಆರೋಪಿತರನ್ನು ಠಾಣೆಗೆ ಹಾಜರುಪಡಿಸಿದ್ದು, ಆರೋಪಿತರನ್ನು ಮೌಖಿಕವಾಗಿ ವಿಚಾರಿಸಿರುತ್ತೇನೆ. ದಸ್ತಗಿರಿ ಕ್ರಮ ಅನುಸರಿಸಿ ಅದೇ ದಿನ ಆರೋಪಿತರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ. ದಿಃ 11.07.2009 ರಂದು ಈ ಕೇಸಿನಲ್ಲಿ ಅಮಾನತ್ತುಪಡಿಸಿದ

ವಾಹನವನ್ನು ನ್ಯಾಯಾಲಯದ ಆದೇಶದಂತೆ ಬಿಡುಗಡೆ ಮಾಡಿರುತ್ತೇನೆ. ದಿಃ 29.08.2009 ರಂದು ಚಾಸಾ 1 ಮತ್ತು ಇತರೆ ಸಾಕ್ಷಿದಾರರ ಹಾಜರಾತಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ನಂತರ ತನಿಖೆ ಪೂರ್ಣಗೊಳಿಸಿ ಆರೋಪಿತರ ವಿರುದ್ಧ ಅಂತಿಮ ವರದಿ ಸಲ್ಲಿಸಿರುತ್ತೇನೆ. ದಿಃ11.07.2009 ರ ಮಹಜರನ್ನು ನಿಪಿ 17, ಸಾಕ್ಷಿ ಸಹಿಯನ್ನು ನಿಪಿ 17 ಎ, ನಿಪಿ 16 ರಲ್ಲಿ ಇರುವ ಸಾಕ್ಷಿ ಸಹಿಯನ್ನು ನಿಪಿ 16 ಬಿ ಎಂದು ಗುರುತಿಸಲಾಯಿತು. ಸಾಕ್ಷಿ ಬಿಡುಗಡೆ ಮಾಡಿದ ವಾಹನದ ಪೋಟೋಗಳನ್ನು ನೋಡಿ ಗುರುತಿಸಿದ್ದು ಅವು ಈಗಾಗಲೇ ನಿಪಿ 11 ರಿಂದ 15 ಎಂದು ಗುರುತಿಸಲಾಯಿತು. ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ಆರೋಪಿತರನ್ನು ಇದೇ ಮೊದಲ ಬಾರಿಗೆ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ 8 ರವರಿಂದ ಸದರಿ ದಿನ ಯಾವುದೇ ಕಡತ ಪಡೆದು ಕೊಂಡಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಚಾಸಾ 1 ರವರ ಮರು ಹೇಳಿಕೆ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಚಾಸಾ 4 ರಿಂದ 6 ರವರ ಹೇಳಿಕೆ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿತರನ್ನು ವಿಚಾರಿಸಿಲ್ಲ ಎಂದರೆ ಸರಿಯಲ್ಲ. ಆರೋಪಿಯನ್ನು ದಸ್ತಗಿರಿ ಮಾಡಿಲ್ಲ ಮತ್ತು ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಸುಳ್ಳು ಹಾಜರಾತಿ ಪ್ರಮಾಣ ಪತ್ರ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ 1 ರವರಿಗೆ ಸಹಾಯ ಮಾಡಲು ಸುಳ್ಳು ದೋಷಾರೋಪಣ ಪಟ್ಟಿಯನ್ನು ಇಲಾಖಾ ಅಂಕಿ ಅಂಶಗಳಿಗೋಸ್ಕರ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು).

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ, ದಂಡಾಧಿಕಾರಿಗಳು, ಹೆಚ್.ಡಿ.ಕೋಟೆ.**